# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2015-16ನೇ ಸಾಲಿನಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 70 ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿ ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 248 ಎಂಡಿಎಸ್ 2013, ದಿನಾಂಕ: 17.01.2014

2.ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರ ಏಕಕಡತದ ಪ್ರಸ್ತಾವನೆ ಸಂಖ್ಯೆ:ಅಸಂನಿ/ವಿನಿ/ಸಿಆರ್-187/2013-14,ದಿನಾಂಕ:18-2-2014,22-4-2015 ಹಾಗೂ 25-07-2015.

<><><>

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಡಾ॥ನಂಜುಂಡಪ್ಪ ವರದಿಯನ್ವಯ ಹಿಂದುಳಿದ/ಅತೀ ಹಿಂದುಳಿದ/ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿನ, ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳ ಕಟ್ಟಡದ ವೆಚ್ಚ ತಲಾ ರೂ.1.00 ಕೋಟಿ ಮತ್ತು ಮೂಲಭೂತ ಸೌಕರ್ಯಕ್ಕೆ ತಲಾ ರೂ.20.00 ಲಕ್ಷಗಳಂತೆ 2013-14ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4225-03-277-2-03 (133) ರಡಿಯಲ್ಲಿ ಒದಗಿಸಲಾಗಿರುವ ರೂ.40.00 ಕೋಟಿಗಳ ಅನುದಾನದಲ್ಲಿ ಪ್ರತಿ ವಿದ್ಯಾರ್ಥಿನಿಲಯಕ್ಕೆ ಕಟ್ಟಡ ನಿರ್ಮಾಣಕ್ಕಾಗಿ ರೂ.57.14 ಲಕ್ಷಗಳಂತೆ ಒಟ್ಟು 70 ವಿದ್ಯಾರ್ಥಿನಿಲಯಗಳಿಗೆ ಅನುಮೋದನೆ ನೀಡಿ ಆದೇಶಿಸಿದೆ.

ವಿಶೇಷ ಅಭಿವೃದ್ಧಿ ಯೋಜನೆಯಡಿ 70 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ 2013-14ನೇ ಸಾಲಿನಲ್ಲಿ ಒದಗಿಸಲಾದ ರೂ.40.00ಕೋಟಿಗಳ ಅನುದಾನದಲ್ಲಿ ಪ್ರತಿ ವಿದ್ಯಾರ್ಥಿನಿಲಯಕ್ಕೆ ರೂ.57.14 ಲಕ್ಷಗಳಂತೆ ಒಟ್ಟು ರೂ.40.00ಕೋಟಿಗಳನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದ್ದು, ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುತ್ತಿದೆ. ಈ ಕಟ್ಟಡಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳಿಗೆ ಉಳಿಕೆ ಅನುದಾನವನ್ನು 2014-15ನೇ ಸಾಲಿನಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಪ್ರಗತಿಯನ್ನಾಧರಿಸಿ ಬಿಡುಗಡೆ ಮಾಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ 70 ಸ್ಥಳಗಳಲ್ಲಿಯೂ ಸಹ ಸದರಿ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಮಾಡುತ್ತಿರುವುದರಿಂದ, 2015-16ನೇ ಸಾಲಿನಿಂದ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳನ್ನು ದಾಖಲಿಸಿ ಪ್ರಾರಂಭಿಸಲು ಹಾಗೂ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ ಅವಶ್ಯವಿರುವ ಹುದ್ದೆಗಳೊಂದಿಗೆ ಸೃಜಿಸಿ, ಪ್ರಾರಂಭಿಸಲು ಅನುಮತಿ ಕೋರಿ ನಿರ್ದೇಶಕರು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

......2

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 167 MDS 2014, ದಿನಾಂಕ: 25-01-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಡಾ॥ ನಂಜುಂಡಪ್ಪ ವರದಿಯನ್ವಯ, ಹಿಂದುಳಿದ/ಅತೀ ಹಿಂದುಳಿದ/ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿ ಕಳೆದ 2013-14ನೇ ಸಾಲಿನಲ್ಲಿ ಕಟ್ಟಡ ಕಾಮಗಾರಿಗಳನ್ನು ಕೈಗೊಂಡಿರುವ ಅನುಬಂಧದಲ್ಲಿ ಸೂಚಿಸಿರುವ 70 ಸ್ಥಳಗಳಲ್ಲಿ ಮಾತ್ರ 2015-16ನೇ ಸಾಲಿನಿಂದ 50 ಸಂಖ್ಯಾಬಲದೊಂದಿಗೆ ಹೊಸ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಕೆಳಕಂಡ ಹುದ್ದೆಗಳೊಂದಿಗೆ ಸೃಜಿಸಿ, ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

**70 ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಸೃಜಿಸಲಾದ ಹುದ್ದೆಗಳ ವಿವರ.**

| ಕ್ರ ಸಂ | ಹುದ್ದೆಯ ಹೆಸರು | ಪ್ರತಿ ವಿದ್ಯಾರ್ಥಿನಿಲಯಕ್ಕೆ ಮಂಜೂರು ಮಾಡಲಾದ ಹುದ್ದೆಗಳು | 70 ವಿದ್ಯಾರ್ಥಿ ನಿಲಯಗಳಿಗೆ ಮಂಜೂರು ಮಾಡಲಾದ ಹುದ್ದೆಗಳು | ನೇಮಕಾತಿ ವಿಧಾನ |
|---|---|---|---|---|
| 1 | ನಿಲಯಪಾಲಕರು | 01 | 70 | ಸಿ & ಆರ್ ನಿಯಮಾನುಸಾರ |
| 2 | ಅಡುಗೆಯವರು | 01 | 70 | ಹೊರಗುತ್ತಿಗೆ |
| 3 | ಅಡುಗೆ ಸಹಾಯಕರು | 02 | 140 | ಹೊರಗುತ್ತಿಗೆ |
| 4 | ರಾತ್ರಿಕಾವಲುಗಾರರು / ಜವಾನ | 01 | 70 | ಹೊರಗುತ್ತಿಗೆ |
| | ಒಟ್ಟು ಹುದ್ದೆಗಳು | 05 | 350 | |

**ಷರತ್ತುಗಳು:**

1. ಪ್ರಸ್ತುತ ಮಂಜೂರು ಮಾಡಿರುವ ಮೆಟ್ರಿಕ್ ನಂತರದ 70 ವಿದ್ಯಾರ್ಥಿನಿಲಯಗಳನ್ನು 2015-16ನೇ ಸಾಲಿನಲ್ಲಿ ಸ್ವಂತ ಕಟ್ಟಡ ನಿರ್ಮಾಣವಾಗುವವರೆಗೆ ಬಾಡಿಗೆ ಕಟ್ಟಡದಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಪ್ರಾರಂಭಿಸುವುದು.
2. ಪ್ರತಿ ವರ್ಷ ವಿದ್ಯಾರ್ಥಿಗಳನ್ನು ನಿಗದಿಪಡಿಸಿದ ಅನುಪಾತದಂತೆ ದಾಖಲಾತಿಗೆ ಕ್ರಮವಹಿಸತಕ್ಕದ್ದು.
3. ಪ್ರತಿ ಮೆಟ್ರಿಕ್ ನಂತರದ 70 ವಿದ್ಯಾರ್ಥಿನಿಲಯಗಳಲ್ಲಿ ಶೈಕ್ಷಣಿಕ ಗುಣಮಟ್ಟ ಕಾಪಾಡುವುದರ ಜೊತೆಗೆ ಸುಧಾರಣಾ ಕ್ರಮಗಳನ್ನು ಕೈಗೊಂಡು ಉತ್ತಮ ವಾತಾವರಣ ಕಲ್ಪಿಸುವುದು.
4. ಪ್ರತಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲೇ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿನ ಘಟಕ, ಗ್ರಂಥಾಲಯ, ಟೇಬಲ್, ಚೇರ್, ಅಡುಗೆ ಪಾತ್ರೆ, ಲೇಖನ ಸಾಮಗ್ರಿ, ಕಂಪ್ಯೂಟರ್, ಪ್ರಿಂಟರ್, ಯು.ಪಿ.ಎಸ್‌ಗಳನ್ನು ಅಳವಡಿಸುವುದು, ಸೋಲಾರ್ ಲೈಟಿಂಗ್, ಸೋಲಾರ್ ವಾಟರ್ ಹೀಟರ್, ಹಾಸಿಗೆ, ಹೊದಿಕೆ, ಸಿ.ಸಿ ಕ್ಯಾಮರ ಅಳವಡಿಸುವುದು ಇತ್ಯಾದಿಗಳನ್ನು ಪೂರೈಸತಕ್ಕದ್ದು.
5. ಕಾಲ ಕಾಲಕ್ಕೆ ಮೆಟ್ರಿಕ್ ನಂತರ 70 ವಿದ್ಯಾರ್ಥಿನಿಲಯಗಳಿಗೆ ಒದಗಿಸಿದ ಅನುದಾನದಲ್ಲಿ ನಿರ್ವಹಣೆ ವೆಚ್ಚ, ಸಿಬ್ಬಂದಿ ವೇತನ, ಎಲ್ಲಾ ಮೂಲಭೂತ ಸೌಕರ್ಯ ನೀಡತಕ್ಕದ್ದು.
6. ಪ್ರತಿ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಾಲ ಕಾಲಕ್ಕೆ ತರಬೇತಿಯನ್ನು ನೀಡತಕ್ಕದ್ದು.
7. ಕರ್ನಾಟಕ ಲೋಕಸೇವಾ ಆಯೋಗ/ಆಯ್ಕೆ ಪ್ರಾಧಿಕಾರ ಮೂಲಕ ಸಿಬ್ಬಂದಿಗಳನ್ನು ನೇಮಕ ಮಾಡಲು ಕ್ರಮವಹಿಸಿ ನೇಮಕಾತಿ ನಂತರ ತರಬೇತಿ ಹಾಗೂ ಮೇಲ್ವಿಚಾರಣೆಯನ್ನು ನಿರ್ದೇಶಕರು ಮಾಡತಕ್ಕದ್ದು.